# ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 22 ಹೆಚ್‌ಹೆಚ್‌ಎಲ್ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:10.06.2019

## ಅಧಿಸೂಚನೆ

ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರಾದ ಡಾ|| ಗಿರೀಶ್ ಕಾರ್ನಾಡ್‌ರವರು ದಿನಾಂಕ: 10.06.2019 ರಂದು ನಿಧನ ಹೊಂದಿರುತ್ತಾರೆ. ಇವರ ನಿಧನದ ವಾರ್ತೆಯನ್ನು ಸರ್ಕಾರವು ತೀವ್ರ ಸಂತಾಪದಿಂದ ಈ ಮೂಲಕ ಪ್ರಕಟಿಸಿದೆ.

ದಿವಂಗತರ ಗೌರವಾರ್ಥವಾಗಿ ರಾಜ್ಯಾದ್ಯಂತ ಎಲ್ಲಾ ಶಾಲಾ ಕಾಲೇಜುಗಳಿಗೆ ಹಾಗೂ ಸರ್ಕಾರಿ ಕಛೇರಿಗಳಿಗೆ ದಿನಾಂಕ: 10.06.2019ರ ಸೋಮವಾರದಂದು ಸಾರ್ವತ್ರಿಕ ರಜೆಯನ್ನು ಘೋಷಿಸಿದೆ. ಅಲ್ಲದೇ ದಿನಾಂಕ: 10.06.2019 ರಿಂದ ದಿನಾಂಕ: 12.06.2019ರವರೆಗೆ (03 ದಿನಗಳು) ರಾಜ್ಯಾದ್ಯಂತ ಶೋಕಾಚರಣೆಯನ್ನು ಆಚರಿಸಲಾಗುವುದು. ಈ ಅವಧಿಯಲ್ಲಿ ಯಾವುದೇ ಅಧಿಕೃತ ಮನೋರಂಜನಾ ಕಾರ್ಯಕ್ರಮಗಳು ಇರುವುದಿಲ್ಲ ಹಾಗೂ ನಿಯಮಿತವಾಗಿ ರಾಷ್ಟ್ರಧ್ವಜವನ್ನು ಹಾರಿಸಲ್ಪಡುವ ಸರ್ಕಾರದ ಎಲ್ಲಾ ಕಟ್ಟಡಗಳ ಮೇಲೆ ರಾಷ್ಟ್ರಧ್ವಜವನ್ನು ಅರ್ಧಮಟ್ಟದಲ್ಲಿ ಹಾರಿಸಲಾಗುವುದು.

ಈ ಆದೇಶವನ್ನು Negotiable Instrument Act ಅಡಿಯ ಪ್ರಕಾರವೂ ಕೂಡ ಸಾರ್ವಜನಿಕ ರಜೆಯೆಂದು ಘೋಷಿಸಿದೆ.

ಮೃತರ ಅಂತ್ಯಕ್ರಿಯೆಯನ್ನು ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ. ಶಿವಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿಗಳು-1 (ಪ್ರ),
ಸಿಆಸುಇ (ರಾಜ್ಯ ಶಿಷ್ಟಾಚಾರ)

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು, ರಾಜ ಭವನ, ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
4. ಮುಖ್ಯ ಮಾಹಿತಿ ಆಯುಕ್ತರು, ಮಾಹಿತಿ ಆಯೋಗ, ಬೆಂಗಳೂರು.